# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 401

ಸದಸ್ಯರ ಹೆಸರು : ಡಾ:ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 18.07.2024

ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ನಗರದಲ್ಲಿ ಸಂಚಾರ ದಟ್ಟಣೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ? ಬಂದಿದ್ದಲ್ಲಿ ಸುಗಮ ಸಂಚಾರಕ್ಕೆ ಸರ್ಕಾರ ಕೈಗೊಂಡ ಕ್ರಮವೇನು (ಮಾಹಿತಿ ನೀಡುವುದು) | ಬಂದಿರುತ್ತದೆ.<br><br>ಸಂಚಾರ ದಟ್ಟಣೆ ಇರುವ ಸ್ಥಳವಾದ ಕೇಂದ್ರ ಬಸ್ ನಿಲ್ದಾಣದಲ್ಲಿ ಒಬ್ಬರು ಪಿ.ಎಸ್.ಐ ದರ್ಜೆಯ ಅಧಿಕಾರಿಯವರನ್ನು ಮೇಲ್ವಿಚಾರಣೆಗೆ ನೇಮಿಸಿ, ಸಂಚಾರ ಪೊಲೀಸ್ ಠಾಣೆ-01 ರಿಂದ 04 ಜನ ಪೊಲೀಸ್ ಸಿಬ್ಬಂದಿಗಳನ್ನು ಹಾಗೂ ಅಶೋಕ ನಗರ ಪೋಲೀಸ್ ಠಾಣೆಯ 02 ಜನ ಸಿಬ್ಬಂದಿಗಳನ್ನು ಸರದಿಯಂತೆ ನೇಮಿಸಿ, ಆಟೋ ರಿಕ್ಷಾಗಳನ್ನು ಪ್ರತ್ಯೇಕ ಮಾರ್ಗದ ಮುಖಾಂತರ ಕಳುಹಿಸುವ ಮೂಲಕ, ಕೇಂದ್ರ ಬಸ್ ನಿಲ್ದಾಣದ ಮುಂದೆ ಸಂಚಾರ ದಟ್ಟಣೆ ಆಗದಂತೆ ಸುಗಮ ಸಂಚಾರ ವ್ಯವಸ್ಥೆಗೆ ಕ್ರಮ ಕೈಕೊಳ್ಳಲಾಗುತ್ತಿರುತ್ತದೆ.<br><br>ಸಂಚಾರ ದಟ್ಟಣೆ ಇರುವ ಸ್ಥಳವಾದ ಸೂಪರ್ ಮಾರ್ಕೆಟ್ ಬಳಿ ಒಬ್ಬರು ಪಿ.ಎಸ್.ಐ ದರ್ಜೆಯ ಅಧಿಕಾರಿಯವರನ್ನು ಮೇಲ್ವಿಚಾರಣಾ ಅಧಿಕಾರಿಯಾಗಿ ಹಾಗೂ 04 ಜನ ಪೊಲೀಸ್ ಸಿಬ್ಬಂದಿಯವರನ್ನು ಸರದಿಯಂತೆ ನೇಮಿಸಿ, ಸಂಚಾರ ದಟ್ಟಣೆ ಆಗದಂತೆ ಹಾಗೂ ರಸ್ತೆ ಮೇಲೆ ತಳ್ಳು ಬಂಡಿ ವ್ಯಾಪಾರಸ್ಥರು ರಸ್ತೆ ಮೇಲೆ ಬಾರದಂತೆ ಸುಗಮ ಸಂಚಾರಕ್ಕೆ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.<br><br>ಕಲಬುರಗಿ ನಗರದ ಪ್ರಮುಖ ಸರ್ಕಲ್‌ಗಳಲ್ಲಿ ಎ.ಎಸ್.ಐ ಹಾಗೂ ಪಿ.ಎಸ್.ಐ ದರ್ಜೆಯ ಅಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಸರದಿಯಂತೆ 02 ಜನ ಪೊಲೀಸ್ ಸಿಬ್ಬಂದಿಗಳನ್ನು ಮತ್ತು ಪೆಟ್ರೋಲಿಂಗ್ ವಾಹನದ ಜೊತೆಗೆ ಒಬ್ಬ ಎ.ಎಸ್.ಐ ದರ್ಜೆಯ ಅಧಿಕಾರಿಯವರನ್ನು ನೇಮಿಸಲಾಗಿರುತ್ತದೆ. ಸಂಚಾರಿ ನಿಯಮಗಳನ್ನು ಉಲ್ಲಂಘಿಸಿ ಸುಗಮ ಸಂಚಾರಕ್ಕೆ ಅಡೆ-ತಡೆ ಉಂಟು ಮಾಡುವ ವಾಹನ ಸವಾರರ ವಿರುದ್ಧ ಸಂಚಾರಿ ನಿಯಮ ಉಲ್ಲಂಘನೆಯ ಪ್ರಕರಣಗಳನ್ನು ದಾಖಲಿಸಿ, ಸುಗಮ ಸಂಚಾರ ವ್ಯವಸ್ಥೆಗೆ ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.<br><br>ನಗರದ ಪ್ರಮುಖ ವೃತಗಳಲ್ಲಿ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು ಫ್ರೀ ಲೆಫ್ಟ್ ಟರ್ನ್ ವ್ಯವಸ್ಥೆಯನ್ನು ಕೈಗೊಳ್ಳಲು ಮತ್ತು ರಸ್ತೆಗಳಲ್ಲಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲವಾಗಲು |

| | | |
|---|---|---|
| | | ರಸ್ತೆಗಳಲ್ಲಿರುವ ತಗ್ಗು ಗುಂಡಿಗಳನ್ನು ಮುಚ್ಚಲು ಹಾಗೂ ರಸ್ತೆಯ ಬದಿಯಲ್ಲಿ ಬೆಳೆದಿರುವ ಗಿಡ ಗಂಟಿಗಳನ್ನು ತೆರವುಗೊಳಿಸಲು ಹಾಗೂ ಬೀದಿ ದೀಪಗಳನ್ನು ಅಳವಡಿಸಲು ಮಾನ್ಯ ಆಯುಕ್ತರು, ಮಹಾ ನಗರ ಪಾಲಿಕೆ, ಕಲಬುರಗಿ ರವನ್ನು ಕೋರಲಾಗಿರುತ್ತದೆ. |
| ಆ) | ಕಲಬುರಗಿ ನಗರದಲ್ಲಿ ಇರುವ ವರ್ತುಲ ರಸ್ತೆಯಲ್ಲಿ ಸಂಚಾರ ದಟ್ಟಣೆಯಿಂದಾಗಿ ಅಪಘಾತಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದ್ದಲ್ಲಿ ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡ ಕ್ರಮವೇನು? | ಬಂದಿರುತ್ತದೆ.<br>ಕಲಬುರಗಿ ನಗರದ ವರ್ತುಲ ರಸ್ತೆಗಳಲ್ಲಿ ಬೆಳಿಗ್ಗೆ ಮತ್ತು ಸಾಯಂಕಾಲ ಸಂಚಾರ ದಟ್ಟಣೆ ಆಗದಂತೆ ನೋಡಿಕೊಳ್ಳಲು ಸರದಿ ಪ್ರಕಾರ ಪೊಲೀಸ್ ಸಿಬ್ಬಂದಿಯವರನ್ನು ಮತ್ತು ಹೈವೇ ಪೆಟ್ರೋಲಿಂಗ್ ವಾಹನ ಸಿಬ್ಬಂದಿಯವರನ್ನು ನೇಮಿಸಲಾಗುತ್ತಿರುತ್ತದೆ.<br>ಅತೀ ವೇಗ ಹಾಗೂ ಇತರೆ ಸಂಚಾರಿ ನಿಯಮಗಳನ್ನು ಉಲ್ಲಂಘಿಸುವ ವಾಹನಗಳ ಚಾಲಕರ ವಿರುದ್ಧ ಎ.ಎಸ್.ಐ ದರ್ಜೆಯ ಅಧಿಕಾರಿಗಳು ಹಾಗೂ ಮೇಲ್ಪಟ್ಟ ಅಧಿಕಾರಿಗಳಿಂದ ಸಂಚಾರಿ ನಿಯಮ ಉಲ್ಲಂಘನೆಯ ಪ್ರಕರಣಗಳನ್ನು ದಾಖಲಿಸುವ ಮೂಲಕ ರಸ್ತೆ ಅಪಘಾತಗಳನ್ನು ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿರುತ್ತದೆ.<br>ರಾತ್ರಿ ವೇಳೆಯಲ್ಲಿ ರಸ್ತೆ ಅಫಘಾತಗಳನ್ನು ತಡೆಯಲು ಮದ್ಯಪಾನ ಮಾಡಿ ವಾಹನ ಚಲಾಯಿಸುವ ಚಾಲಕರ ವಿರುದ್ಧ ಸಂಚಾರಿ ನಿಯಮ ಉಲ್ಲಂಘನೆಯ ಪ್ರಕರಣಗಳನ್ನು ದಾಖಲಿಸಿ, ಕ್ರಮ ಕೈಗೊಳ್ಳಲಾಗುತ್ತಿರುತ್ತದೆ. ಪ್ರಮುಖ ಹೆದ್ದಾರಿಗಳಲ್ಲಿ, ಬರುವ ವೃತ್ತಗಳಲ್ಲಿ ಜಿಬ್ರಾ ಕ್ರಾಸಿಂಗ್ ಲೈನ್ ಮತ್ತು ವೈಜ್ಞಾನಿಕವಾಗಿ ರೋಡ್ ಹಂಪ್ಸ್ ಅಳವಡಿಸಲು ಹಾಗೂ ಸೂಚನಾ ಫಲಕಗಳನ್ನು ಅಳವಡಿಸಲು ಸಂಬಂಧಪಟ್ಟ ಹೆದ್ದಾರಿ ಪ್ರಾಧಿಕಾರಕ್ಕೆ ತಿಳಿಸಲಾಗಿರುತ್ತದೆ.<br>ಕಲಬುರಗಿ ನಗರದ ವರ್ತುಲ ರಸ್ತೆಯಲ್ಲಿ ಟ್ರಾಫಿಕ್ ಸಿಗ್ನಲ್ ಬಳಸಿಕೊಂಡು ಬೆಳಿಗ್ಗೆ 8–00 ಗಂಟೆಯಿಂದ ರಾತ್ರಿ 10–00 ಗಂಟೆಯವರೆಗೆ ಸಿಬ್ಬಂದಿಯವರನ್ನು ನೇಮಿಸಿ, ನಗರದ ಒಳಗಡೆ ಭಾರಿ ವಾಹನಗಳು ಬಾರದಂತೆ ಹಾಗೂ ರಸ್ತೆ ಬದಿಯಲ್ಲಿ ವಾಹನಗಳು ನಿಲ್ಲಿಸದಂತೆ ಹೆದ್ದಾರಿ ಗಸ್ತು ವಾಹನಗಳನ್ನು ಗಸ್ತು ಕರ್ತವ್ಯಕ್ಕೆ ನೇಮಿಸಲಾಗಿರುತ್ತದೆ. ರಾತ್ರಿ ವೇಳೆಯಲ್ಲಿ ವರ್ತುಲ ರಸ್ತೆಯಲ್ಲಿ ಭಾರಿಗಾತ್ರದ ವಾಹನಗಳು ಕೆಟ್ಟು ನಿಂತಲ್ಲಿ, ಹೆದ್ದಾರಿ ಗಸ್ತು ವಾಹನದ ಸಿಬ್ಬಂದಿಯವರು ಸದರಿ ವಾಹನಗಳನ್ನು ತೆರವುಗೊಳಿಸುವ ಮೂಲಕ ನಗರದಲ್ಲಿನ ವರ್ತುಲ ರಸ್ತೆಯಲ್ಲಿ ಸಂಚಾರ ದಟ್ಟಣೆ ಆಗದಂತೆ ಮತ್ತು ರಸ್ತೆ ಅಪಘಾತಗಳನ್ನು ತಡೆಗಟ್ಟಲು ಕ್ರಮ ಕೈಕೊಳ್ಳಲಾಗುತ್ತಿರುತ್ತದೆ. |

ಹೆಚ್‌ಡಿ 325 ಎಸ್‌ಎಸ್‌ಟಿ 2024

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು